ಸಮತಾ ನುಡಿ

196770

ಕನ್ನಡ ದಿನ ಪತ್ರಿಕೆ ಬಸವಕಲ್ಯಾಣ

ಸಾಮಾಜಿಕ ನ್ಯಾಯಕ್ಕಾಗಿ

ಸಂಪಾದಕರು : ಗುರುನಾಥ ಗಡ್ಡೆ
ಮೊ : 9739106045
email : bsuddibk@gmail.com

Samata Nudi Kannada Daily News Paper

PRGI No : KNKAN/25/A5209

ಗೌರವ ಸಂಪಾದಕರು : ಸಿದ್ಧಲಿಂಗ ಗಡ್ಡೆ
ಮೊ : 9036144531

ಸಂಪುಟ: 01 ಸಂಚಿಕೆ: 153 01.09.2026 ಮಂಗಳವಾರ

Volume: 01 Issue: 153 pages 4 Rs.2/- bsuddibk@gmail.com

ಹವಾಮಾನ ವರದಿ
ಬೆಂಗಳೂರು, ಕರ್ನಾಟಕ
01 ಸೆಪ್ಟೆಂಬರ್ 2026, ಮಂಗಳವಾರ

ಇಂದಿನ ಹವಾಮಾನ: 25°C
ಮಧ್ಯಮ ಮಳೆಯ ಸಾಧ್ಯತೆ
ಆರ್ದ್ರತೆ: 90%
ಗಾಳಿ ವೇಗ: 15-25 km/h
ಗಾಳಿಯ ದಿಕ್ಕು: ಪೂರ್ವ ಆಗ್ನೇಯ
ಮಳೆಯ ಸಾಧ್ಯತೆ: 80%
ಕನಿಷ್ಠ 21°C

ಮುಂದಿನ 5 ದಿನಗಳ ಹವಾಮಾನ ಮುನ್ಸೂಚನೆ

ಬುಧವಾರ	ಗುರುವಾರ	ಶುಕ್ರವಾರ	ಶನಿವಾರ	ಭಾನುವಾರ
27°C / 20°C	27°C / 21°C	26°C / 20°C	28°C / 19°C	29°C / 19°C

ಹೊಸ ಕನ್ನಡ ಸಾಹಿತ್ಯ ಸಂಪುಟಗಳ ಬಿಡುಗಡೆ ಸಮಾರಂಭ ಇಂದು ಸಂಜೆ 5 ಗಂಟೆಗೆ ಸರಿಯಾಗಿ ಕನ್ನಡ ಭವನದಲ್ಲಿ ಆರಂಭ.

ನೇಪಾಳ ಪ್ರವಾಹ: ನಾಪತ್ತೆಯಾದ ಕನ್ನಡಿಗರ ಪತ್ತೆಗೆ ಸಿಎಂ ಶಿವಕುಮಾರ್ ನೇತೃತ್ವದಲ್ಲಿ ತೀವ್ರ ಕಾರ್ಯಾಚರಣೆ

ಬೆಂಗಳೂರು 31 ಆಗಸ್ಟ್ : ನೇಪಾಳದಲ್ಲಿ ಸಂಭವಿಸಿದ ಭೀಕರ ಪ್ರವಾಹ ಹಾಗೂ ಭೂಕುಸಿತದ ಬಳಿಕ ಸಂಕಷ್ಟಕ್ಕೆಸಿಲುಕಿರುವ ಕರ್ನಾಟಕವರ ಪತ್ತೆ ಮತ್ತು ಸುರಕ್ಷಿತ ವಾಪಸಾತಿಗಾಗಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವಾಲಯದೊಂದಿಗೆ ನಿರಂತರ ಸಮನ್ವಯ ಸಾಧಿಸುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ನೇಪಾಳದಲ್ಲಿ ಸಿಲುಕಿರುವ ಕನ್ನಡಿಗರ ರಕ್ಷಣಾ ಕಾರ್ಯಾಚರಣೆಯ ಪ್ರಗತಿ ಕುರಿತು ನವದೆಹಲಿಯ ಕರ್ನಾಟಕ ಭವನದ ನಿವಾಸಿ ಆಯುಕ್ತಂದ ಮುಖ್ಯಮಂತ್ರಿ ಮಾಹಿತಿ ಪಡೆದಿದ್ದಾರೆ. ಲಭ್ಯವಾದ ಮಾಹಿತಿಯ ಪ್ರಕಾರ, ನೇಪಾಳಕ್ಕೆ ತೆರಳಿದ್ದ ಕರ್ನಾಟಕದ 33 ಮಂದಿಯ ಪೈಕಿ ಇಬ್ಬರು ಈಗಾಗಲೇ ಸುರಕ್ಷಿತವಾಗಿ ಮಾಪಸಾಗಿದ್ದಾರೆ. ಉಳಿದವರಲ್ಲಿ ಹಲವರನ್ನು ಪತ್ತೆಹಚ್ಚಲಾಗಿದ್ದು, ಇನ್ನೂ 14 ಮಂದಿಯ ಪತ್ತೆ ಕಾರ್ಯ ಬಾಕಿಯಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಾಪತ್ತೆಯಾಗಿರುವವರಲ್ಲಿ ಇಬ್ಬರು ಮೈಸೂರಿನವರು ಹಾಗೂ ಉಳಿದವರು ಬೆಂಗಳೂರಿನವರು ಎಂದು ತಿಳಿದುಬಂದಿದೆ. ಪ್ರವಾಹ ಮತ್ತು ಭೂಕುಸಿತದಿಂದ ಹಲವು ಪ್ರದೇಶಗಳಲ್ಲಿ ರಸ್ತೆ ಹಾಗೂ ಸಂಪರ್ಕ ವ್ಯವಸ್ಥೆ ಸಂಪೂರ್ಣವಾಗಿ ಹಾನಿಗೊಳಗಾಗಿರುವುದರಿಂದ ನಾಪತ್ತೆಯಾದವರನ್ನು ಸಂಪರ್ಕಿಸುವುದು ಅಧಿಕಾರಿಗಳಿಗೆ ಸವಾಲಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರವು ವಿದೇಶಾಂಗ ಸಚಿವಾಲಯ, ನೇಪಾಳದಲ್ಲಿರುವ ಭಾರತೀಯ ರಾಯಭಾರ ಕಚೇರಿ ಹಾಗೂ ಸ್ಥಳೀಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದೆ. ಅಗತ್ಯವಿರುವ ಕಡೆ ರಾಜ್ಯದ ಪ್ರತಿನಿಧಿಗಳನ್ನು ಕಳುಹಿಸಿ ಮಾಹಿತಿ ಸಂಗ್ರಹಿಸುವ ಪ್ರಯತ್ನವೂ ನಡೆಯುತ್ತಿದೆ.

ಈ ಹಿಂದೆ ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರವು ನೇಪಾಳ ಮತ್ತು ಟಿಬೆಟ್ ಸ್ವಾಯತ್ತ ಪ್ರದೇಶದಲ್ಲಿ ಸಿಲುಕಿರುವ ಅಥವಾ ಸಂಪರ್ಕಕ್ಕೆ ಸಿಗದ ಕರ್ನಾಟಕದ ನಿವಾಸಿಗಳ ವಿವರಗಳನ್ನು ಕ್ರೋಢೀಕರಿಸಿತ್ತು. ಹೆಚ್ಚಿನವರು ನೇಪಾಳದ ರಸುವಾ ಜಿಲ್ಲೆಯ ತಿಮಿರೆ ಪ್ರದೇಶದಲ್ಲಿದ್ದು, ಕೆಲವರು ಟಿಬೆಟ್‌ನ ದಾರ್ಚೆನ್‌ನಲ್ಲಿ ಇರುವ ಮಾಹಿತಿ ಲಭ್ಯವಾಗಿತ್ತು. ಪರಿಸ್ಥಿತಿಯ ಹಿನ್ನೆಲೆಯಲ್ಲಿ ರಕ್ಷಣಾ, ಸ್ಥಳಾಂತರ ಹಾಗೂ ಅಗತ್ಯ ನೆರವು ಒದಗಿಸಲು ವಿಶೇಷ ತಂಡಗಳು ಕಾರ್ಯನಿರ್ವಹಿಸುತ್ತಿವೆ.

ಮುಖ್ಯಮಂತ್ರಿ ಶಿವಕುಮಾರ್ ಅವರು ಸುರಕ್ಷಿತವಾಗಿ ಪತ್ತೆಯಾಗಿರುವ

ಕನ್ನಡಿಗರೊಂದಿಗೆ ಸಂಪರ್ಕ ಸಾಧಿಸಿ ಧೈರ್ಯ ತುಂಬುತ್ತಿದ್ದಾರೆ. ಸುರಕ್ಷಿತ ಸ್ಥಳದಲ್ಲಿರುವವರು ಆತಂಕಪಟ್ಟು ಸ್ವಯಂಪ್ರೇರಿತವಾಗಿ ಹೊರಗೆ ತೆರಳಬಾರದು, ಅಧಿಕಾರಿಗಳ ಸೂಚನೆಗಳನ್ನು ಪಾಲಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ. ಸಂಕಷ್ಟದಲ್ಲಿರುವ ಪ್ರತಿಯೊಬ್ಬ ಕನ್ನಡಿಗನ ಸುರಕ್ಷತೆಗೆ ಸರ್ಕಾರ ಬದ್ಧವಾಗಿದೆ ಎಂದು ಭರವಸೆ ನೀಡಿದ್ದಾರೆ.

ನಾಪತ್ತೆಯಾಗಿರುವವರ ಕುಟುಂಬಸ್ಥರೊಂದಿಗೆ ಸರ್ಕಾರ ಮಾಹಿತಿ ನೀಡುತ್ತಿದ್ದು, ಅವರ ಆತಂಕ ನಿವಾರಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ನೇಪಾಳದಲ್ಲಿರುವ ಕನ್ನಡಿಗರು ದೆಹಲಿ ತಲುಪಿದ ಬಳಿಕ ಅವರನ್ನು ಸುರಕ್ಷಿತವಾಗಿ ಬೆಂಗಳೂರಿಗೆ ಕರೆತರಲು ರಾಜ್ಯ ಸರ್ಕಾರ ವ್ಯವಸ್ಥೆ ಮಾಡಲಿದೆ. ದೆಹಲಿಯಲ್ಲಿ ಒಂದು ದಿನ ಉಳಿಯಬೇಕಾದ ಪರಿಸ್ಥಿತಿ ಎದುರಾದರೂ, ಅವರ ಆರೋಗ್ಯ ಹಾಗೂ ಇತರ ಅಗತ್ಯಗಳಿಗೆ ಸರ್ಕಾರ ನೆರವು ನೀಡಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಈ ನಡುವೆ ನೇಪಾಳದಲ್ಲಿ ಸಿಲುಕಿರುವ ಭಾರತೀಯರ ಪತ್ತೆ ಕಾರ್ಯವೂ ಕೇಂದ್ರ ಮಟ್ಟದಲ್ಲಿ ಮುಂದುವರಿದಿದೆ. ಸಂಪರ್ಕ ವ್ಯವಸ್ಥೆ ಹಾನಿಗೊಂಡಿರುವುದರಿಂದ ನಿಖರ ಮಾಹಿತಿ ಸಂಗ್ರಹಿಸುವುದು ಕಷ್ಟವಾಗಿದ್ದು, ಭಾರತೀಯ ರಾಯಭಾರ ಕಚೇರಿಗಳು ಹಾಗೂ ವಿವಿಧ ರಾಜ್ಯ ಸರ್ಕಾರಗಳು ಪರಸ್ಪರ ಸಮನ್ವಯದಲ್ಲಿ ಕಾರ್ಯಾಚರಣೆ ನಡೆಸುತ್ತಿವೆ. ಕರ್ನಾಟಕ ಸರ್ಕಾರವೂ ಈ ಪ್ರಯತ್ನಗಳೊಂದಿಗೆ ಕೈಜೋಡಿಸಿ ನಾಪತ್ತೆಯಾದ ಕನ್ನಡಿಗರ ಪತ್ತೆ, ರಕ್ಷಣೆ ಮತ್ತು ಸುರಕ್ಷಿತ ವಾಪಸಾತಿಗೆ ಆದ್ಯತೆ ನೀಡಿದೆ.

ರಾಹುಲ್ ಗಾಂಧಿ ವಿರುದ್ಧ ಎಫ್‌ಐಆರ್: ಸಂವಿಧಾನದ ಮೇಲಿನ ಗಂಭೀರ ದಾಳಿ ಎಂದ ಪರಮೇಶ್ವರ್

ಬೆಂಗಳೂರು 31 ಆಗಸ್ಟ್ : ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಉತ್ತರಾಖಂಡ ಪೊಲೀಸರು ಎಫ್‌ಐಆರ್ ದಾಖಲಿಸಿರುವುದನ್ನು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತೀವ್ರವಾಗಿ ಖಂಡಿಸಿದ್ದಾರೆ. ಇದು ಪ್ರಜಾಪ್ರಭುತ್ವ, ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಮೇಲೆ ನಡೆದಿರುವ ಗಂಭೀರ ದಾಳಿ ಎಂದು ಅವರು ಆರೋಪಿಸಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಉತ್ತರಾಖಂಡದ ಹಲ್ದ್ವಾನಿಯಲ್ಲಿ ಸಾರ್ವಜನಿಕ ಸಭೆ ನಡೆಸಿದ ಬಳಿಕ, ಅವರು ಭೇಟಿ ನೀಡಿದ ಸ್ಥಳವನ್ನು 'ಶುದ್ಧೀಕರಣ' ಮಾಡಲಾಗಿತ್ತು. ಈ ಘಟನೆಗೆ ಸಂಬಂಧಿಸಿದಂತೆ ರಾಹುಲ್ ಗಾಂಧಿ ಅಕ್ಷೇಪ ವ್ಯಕ್ತಪಡಿಸಿ, ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆಯ ವಿರುದ್ಧ ಧ್ವನಿ ಎತ್ತಿದ್ದರು. ಈ ಹೇಳಿಕೆಗಳ ಹಿನ್ನೆಲೆಯಲ್ಲಿ ಅವರ ವಿರುದ್ಧ ಎಫ್‌ಐಆರ್ ದಾಖಲಾಗಿರುವುದು ಸರಿಯಲ್ಲ ಎಂದು ಪರಮೇಶ್ವರ್ ಹೇಳಿದ್ದಾರೆ.

ದಲಿತ ನಾಯಕರು ಭೇಟಿ ನೀಡಿದ ಸ್ಥಳವನ್ನು ನಂತರ ಶುದ್ಧೀಕರಿಸುವಂತಹ ಘಟನೆಗಳು ಸಮಾಜದಲ್ಲಿ ಇನ್ನೂ ಜಾತಿ ತಾರತಮ್ಯದ ಮನೋಭಾವ ಜೀವಂತವಾಗಿರುವುದನ್ನು ತೋರಿಸುತ್ತವೆ ಎಂದು ಅವರು ಹೇಳಿದರು. ಇಂತಹ ಕೃತ್ಯ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಅದನ್ನು ಪ್ರಶ್ನಿಸಿದ ರಾಹುಲ್ ಗಾಂಧಿ ವಿರುದ್ಧವೇ ಪ್ರಕರಣ ದಾಖಲಿಸಿರುವುದು ವಿಪರ್ಯಾಸ ಎಂದು ಪರಮೇಶ್ವರ್ ಟೀಕಿಸಿದರು.

ಅಸ್ಪೃಶ್ಯತೆ ಹಾಗೂ ಜಾತಿ ತಾರತಮ್ಯದ ವಿರುದ್ಧ ಮಾತನಾಡುವುದು ಅಪರಾಧವೇ ಎಂದು ಪ್ರಶ್ನಿಸಿದ ಅವರು, ಸಂವಿಧಾನವು ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ ಮತ್ತು ಗೌರವದಿಂದ ಬದುಕುವ ಹಕ್ಕು ನೀಡಿದೆ ಎಂದು ಹೇಳಿದರು. ರಾಹುಲ್ ಗಾಂಧಿ ವಿರುದ್ಧದ ಪ್ರಕರಣದಿಂದ ಸಾಮಾಜಿಕ ನ್ಯಾಯದ ವಿಚಾರವನ್ನು ಎತ್ತುವ ಕಾಂಗ್ರೆಸ್‌ನ ಹೋರಾಟ ನಿಲ್ಲುವುದಿಲ್ಲ ಎಂದು ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ೬ ಫ್ಲೈಓವರ್‌ಗಳಲ್ಲಿ ಆಟೋ, ಬೈಕ್, ಗೂಡ್ಸ್ ವಾಹನಗಳಿಗೆ ನಿರ್ಬಂಧ

ಬೆಂಗಳೂರು 31 ಆಗಸ್ಟ್ : ನಗರದಲ್ಲಿ ಸಂಚಾರ ದಟ್ಟಣೆ ಕಡಿಮೆ ಮಾಡುವ ಹಾಗೂ ಮೇಲ್ಸೇತುವೆಗಳಲ್ಲಿ ಸಂಭವಿಸುವ ಅಪಘಾತಗಳನ್ನು ನಿಯಂತ್ರಿಸುವ ಉದ್ದೇಶದಿಂದ ಬೆಂಗಳೂರು ಸಂಚಾರಿ ಪೊಲೀಸರು ಪ್ರಮುಖ ಆರು ಫ್ಲೈಓವರ್‌ಗಳಲ್ಲಿ ಆಟೋರಿಕ್ಷಾ, ದ್ವಿಚಕ್ರ ಹಾಗೂ ಸರಕು ಸಾಗಣೆ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಿದ್ದಾರೆ.

ಬಿಬಿಎಸ್ ಮೇಲ್ಸೇತುವೆ, ಪೀಣ್ಯ ಎಲಿವೇಟೆಡ್ ಕಾರಿಡಾರ್, ಸಿಲ್ಕ್ ಬೋರ್ಡ್‌ನಿಂದ ರಾಗಿಗುಡ್ಡದವರೆಗಿನ ಡಬಲ್ ಡೆಕ್ಕರ್ ಮೇಲ್ಸೇತುವೆ ಹಾಗೂ ಸಂಜೀವನಗರ ಕ್ರಾಸ್‌ನಿಂದ ವಿದ್ಯಾಪೀಠ ಜಂಕ್ಷನ್‌ವರೆಗಿನ ವಿಮಾನ ನಿಲ್ದಾಣ ರಸ್ತೆ ಎಲಿವೇಟೆಡ್ ಕಾರಿಡಾರ್‌ನಲ್ಲಿ ಸೆಪ್ಟೆಂಬರ್ 4ರಿಂದ ನಿರ್ಬಂಧ ಜಾರಿಗೆ ಬರಲಿದೆ. ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್‌ನಲ್ಲಿ ಸೆಪ್ಟೆಂಬರ್ 11ರಿಂದ ನಿಯಮ ಜಾರಿಯಾಗಲಿದೆ.

ಫ್ಲೈಓವರ್‌ಗಳ ವಿನ್ಯಾಸ ಮತ್ತು ಅಗಲ, ಅಪಘಾತಗಳ ತೀವ್ರತೆ, ವಾಹನಗಳು ಕೆಟ್ಟು ನಿಂತಾಗ ಉಂಟಾಗುವ ದಟ್ಟಣೆ, ಪ್ರವೇಶ/ನಿರ್ಗಮನ ಸ್ಥಳಗಳಲ್ಲಿನ ಸಂಚಾರ ಹಾಗೂ ತುರ್ತು ಸೇವೆಗಳ ನಿರ್ವಹಣೆ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಿದ ಬಳಿಕ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿರ್ಬಂಧದ ಮುಖ್ಯ ಉದ್ದೇಶ ರಸ್ತೆ ಸುರಕ್ಷತೆ ಹೆಚ್ಚಿಸುವುದು, ಅಪಘಾತಗಳ ಪರಿಣಾಮ ಕಡಿಮೆ ಮಾಡುವುದು ಮತ್ತು ಮೇಲ್ಸೇತುವೆಗಳಲ್ಲಿ ಸಂಚಾರ ಸುಗಮಗೊಳಿಸುವುದು ಎಂದು ಸಂಚಾರ ಪೊಲೀಸರು ಹೇಳಿದ್ದಾರೆ. ಸಾರ್ವಜನಿಕರು ಹೊಸ ನಿಯಮಗಳನ್ನು ಪಾಲಿಸಿ ಪರ್ಯಾಯ ಮಾರ್ಗಗಳನ್ನು ಬಳಸುವಂತೆ ಸೂಚಿಸಲಾಗಿದೆ.

ಡಾ. ಎಂ,ಎಂ. ಕಲಬುರ್ಗಿ ಚಿಂತನೆ ಮುಂದಿನ ಪೀಳಿಗೆಗೆ ಪರಿಚಯಿಸಿ: ವೀರಣ್ಣ ರಾಜೂರ

ಧಾರವಾಡ 31 ಆಗಸ್ಟ್ : ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ಸಂಶೋಧನಾ ಕ್ಷೇತ್ರಕ್ಕೆ ಡಾ.ಎಂ. ಎಂ.ಕಲಬುರ್ಗಿ ನೀಡಿರುವ ಚಿಂತನೆಗಳು ಹಾಗೂ ಸಂಶೋಧನಾ ಕಾರ್ಯಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ ಎಂದು ಡಾ.ಎಂ.ಎಂ.ಕಲಬುರ್ಗಿ ಟ್ರಸ್ಟ್ ಅಧ್ಯಕ್ಷ ಡಾ.ವೀರಣ್ಣ ರಾಜೂರ ಹೇಳಿದರು.

ಆಲೂರ ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಭಾನುವಾರ ಆಯೋಜಿಸಿದ್ದ ಡಾ. ಎಂ.ಎಂ. ಕಲಬುರ್ಗಿ ಅವರ 11ನೇ ಹುತಾತ್ಮ ದಿನಾಚರಣೆ ವಿಶೇಷ ಉಪನ್ಯಾಸ, ಗ್ರಂಥ ಬಿಡುಗಡೆ ಹಾಗೂ ಅವಾರ್ಡ್ಸ್ ಸರಣಿ ಉಪನ್ಯಾಸದಲ್ಲಿ ಅವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಕೊಡಗು ವಿವಿ ಕುಲಪತಿ ಪ್ರೊ. ಅಶೋಕ್ ಆಲೂರ ಕಲಬುರ್ಗಿ ಅವರು ಬಸವಣ್ಣ ಮತ್ತು ಕನ್ನಡವನ್ನು ತಮ್ಮ ಬದುಕಿನ ಪ್ರಮುಖ ಆಶಯಗಳನ್ನಾಗಿ ತಮ್ಮ ಬದುಕಿನ ಪ್ರಮುಖ ಆಶಯಗಳನ್ನಾಗಿ ಮಾಡಿಕೊಂಡಿದ್ದರು. ಕನ್ನಡದ ಸಂಶೋಧನೆ ಮತ್ತು ವಚನ ಸಾಹಿತ್ಯದ ಅಧ್ಯಯನಕ್ಕೆ ಅವರು ನೀಡಿದ

ಕೊಡುಗೆ ಅಪಾರ.

ಹಸ್ತಪ್ರತಿಗಳು, ಶಾಸನಗಳು ಹಾಗೂ ಕನ್ನಡದ ಜೀವಂತ ಪರಂಪರೆಗಳನ್ನು ಜನರಿಗೆ ಪರಿಚಯಿಸುವ ಮೂಲಕ ಜ್ಞಾನ ಪ್ರಸಾರದ ಕಾರ್ಯಕ್ಕೆ ಅವರು ಮಹತ್ವ ನೀಡಿದರು.

ಸಂಶೋಧನೆಯಲ್ಲಿ ಆಕರಗಳ ಪ್ರಾಮಾಣಿಕತೆಗೆ ಕಲಬುರ್ಗಿ ಅದ್ಯತೆ ನೀಡುತ್ತಿದ್ದರು. ಯಾವುದೇ ವಿಚಾರ ಹೇಳುವ ಮೊದಲು ಅದರ ಆಧಾರದೇನು ಎಂಬುದನ್ನು ಪರಿಶೀಲಿಸಬೇಕು ಎಂಬುದು ಅವರ ನಿಲುವಾಗಿತ್ತು.

ಅವರ ಕೃತಿಗಳು ಹಾಗೂ ಸಂಶೋಧನಾ ಚಿಂತನೆಗಳು ಇಂದಿಗೂ ಸಂಶೋಧಕರಿಗೆ ಮಾರ್ಗದರ್ಶನ ನೀಡುತ್ತಿವೆ ಎಂದರು.

ಹಿರಿಯ ವಿದ್ಯಾಂಸರ ಡಾ ಶಾಂತಿನಾಥ ದಿಬ್ಬದ ಹಳೆಯ ವಿಚಾರಗಳನ್ನು ಪ್ರಶ್ನಿಸಿ, ಆಧಾರಗಳ ಮೂಲಕ ಹೊಸ ಸತ್ಯವನ್ನು ಹುಡುಕುವ ಪ್ರಯತ್ನ ಸಂಶೋಧನೆ ಎಂದು ಹೇಳಿದರು.

ಅಭಿಪ್ರಾಯಿ ಭಿನ್ನತೆ ಇದ್ದಾಗ ಸಂಶೋಧಕನನ್ನು ದಂಡಿಸುವ ಬದಲು ಆಧಾರಸಹಿತವಾಗಿ ವಿಚಾರ ಬಿಡಿಸಬೇಕು. ಆಧಾರಗಳಿಲ್ಲದೆ ಇತಿಹಾಸವಿಲ್ಲ, ಆಧಾರಗಳಿಲ್ಲದೆ ಸಂಶೋಧನೆಯಿಲ್ಲ ಎಂಬ ದೃಷ್ಟಿಕೋನದಿಂದ ಮೂಲ ಆಧಾರಗಳನ್ನು ಶೋಧಿಸಿ ಸಂರಕ್ಷಿಸಬೇಕು. ಎಂ.ಎಂ. ಕಲಬುರ್ಗಿ ಅವರ ಸಂಶೋಧನಾ ದೃಷ್ಟಿ ಕನ್ನಡಪರ ಚಿಂತಕ ರಲ್ಲಿ ಬೆಳೆಯಲ್ಲಿ ಎಂದರು.

"೩೦ ವರ್ಷಗಳ ಸೇವೆ ನನ್ನ ಬದುಕಿನ ಸಾರ್ಥಕ್ಯ" – ಅಶೋಕ್ ಶೆಂಬಳ್ಳಿ ಭಾವುಕ ನುಡಿ

ಬೀದರ್ 31 ಆಗಸ್ಟ್ : ನನ್ನ 35 ವರ್ಷಗಳ ವಾಣಿಜ್ಯ ತೆರಿಗೆ ಇಲಾಖೆಯ ಸೇವೆ ನನ್ನ ಬದುಕಿನಲ್ಲಿ ಅತ್ಯಂತ ಸಾರ್ಥಕ್ಯ ತಂದುಕೊಟ್ಟಿದೆ. ಇಲಾಖೆಯ ಹಿರಿಯರು, ಸಹೋದ್ಯೋಗಿಗಳು ಮತ್ತು ನನ್ನ ಕುಟುಂಬದ ಸಹಕಾರದಿಂದಲೇ ಇಂದು ನಾನು ನಿವೃತ್ತಿಯಿಂದ ನಿವೃತ್ತಿಯಾಗುತ್ತಿದ್ದೇನೆ ಎಂದು ವಾಣಿಜ್ಯ ತೆರಿಗೆ ಅಧಿಕಾರಿ ಶ್ರೀ ಅಶೋಕ್ ಶೆಂಬಳ್ಳಿ ಅವರು ಭಾವುಕರಾಗಿ ನುಡಿದರು.

ಬೆಂಗಳೂರಿನಲ್ಲಿ ನಡೆದ ತಮ್ಮ ಸೇವಾ ನಿವೃತ್ತಿ ಸಮಾರಂಭದಲ್ಲಿ ಮಾತನಾಡಿದ ಅವರು, "ನಾನು ಇಲಾಖೆಗೆ ಬಂದಾಗಿನಿಂದ ಇಲ್ಲಿಯವರೆಗೆ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿದ್ದೇನೆ. ಬಸವಣ್ಣನವರ ತತ್ವದಂತೆ ಕಾಯಕವೇ ಕೈಲಾಸ ಎಂದು ನಂಬಿ ಕೆಲಸ ಮಾಡಿದ್ದೇನೆ. ನನ್ನ ಸೇವಾವಧಿಯಲ್ಲಿ ನನಗೆ ಮಾರ್ಗದರ್ಶನ ಮಾಡಿದ ಎಲ್ಲಾ ಅಧಿಕಾರಿಗಳಿಗೆ, ಸಿಬ್ಬಂದಿ ವರ್ಗದವರಿಗೆ ನಾನು ಚಿರಋಣಿ. ನನ್ನ ಈ ನಿವೃತ್ತಿ ಜೀವನವನ್ನು ಸಮಾಜ ಸೇವೆಗೆ ಮೀಸಲಿಡುತ್ತೇನೆ" ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಹಕಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀ ಪುಂಡಲೀಕ್ ಸಾದರೆ ಅವರು, "ಅಶೋಕ್ ಶೆಂಬಳ್ಳಿ ಅವರು ಅತ್ಯಂತ ಪ್ರಾಮಾಣಿಕ ಮತ್ತು ನಿಷ್ಠಾವಂತ ಅಧಿಕಾರಿ. ಅವರ ಸೇವೆ ಇಲಾಖೆಗೆ ಮಾದರಿಯಾಗಿದೆ" ಎಂದು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿದ್ದ (ಆಅಅಬಿ) (ಜಾರಿ) ಕಲಬುರಗಿಯ ಶ್ರೀ ಶೈಲೇಶ್ ಪಾಟೀಲ್ ಅವರು ಮಾತನಾಡಿ, ಅಶೋಕ್ ಅವರ ಸೇವೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ (ಆಅಅಬಿ) ಗಳಾದ ರಾಮಚಂದ್ರ ಗಿರೀಸಾಗರ, ಮಲ್ಲಿಕಾರ್ಜುನ್, ಶಾಂತಕುಮಾರ್ ರಾಶೋಡ್, ಪರ್ವತಗೌಡ, ಉದ್ಯಮಿ ಗುರುನಾಥ ಕೊಳ್ಳೂರ, ಡಿ.ಕೆ. ಸಿದ್ದಾವರ್ ಸೇರಿದಂತೆ ಅನೇಕ ಗಣ್ಯರು ಅಶೋಕ್ ಶೆಂಬಳ್ಳಿ ಅವರ ಸೇವೆಯನ್ನು ಕೊಂಡಾಡಿ, ನಿವೃತ್ತಿ ಜೀವನಕ್ಕೆ ಶುಭ ಹರಿಸಿದರು.

ಸೆ.೫ರಿಂದ ಮೊದಲ ಪ್ರಜಾ ಸೇವಾ ಅಭಿಯಾನ ಆರಂಭ

ಬೆಂಗಳೂರು 31 ಆಗಸ್ಟ್ : ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಸರಕಾರ ರಚಿಸಿರುವ ನೂತನ ಪ್ರಜಾಸೇವಾ ಇಲಾಖೆಯ ಮೊದಲ ಪ್ರಜಾ ಸೇವಾ ಅಭಿಯಾನ ಸೆ.5ರಿಂದ ವಿಜಯನಗರ ಜಿಲ್ಲೆಯ ಕೂಡ್ಲಿಗಿ ಹೋಬಳಿಯಲ್ಲಿ ಆರಂಭವಾಗಲಿದೆ ಎಂದು ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ತಿಳಿಸಿದ್ದಾರೆ.

ಅಭಿಯಾನದ ವೇಳೆ ಸಾರ್ವಜನಿಕರ ಅಹವಾಲುಗಳನ್ನು ಎರಡು ಪ್ರತ್ಯೇಕ ಸರತಿಗಳಲ್ಲಿ ಸ್ವೀಕರಿಸಲಾಗುತ್ತದೆ. ಮೊದಲ ಸರತಿಯಲ್ಲಿ ಹೊಸದಾಗಿ ಸಲ್ಲಿಸುವ ದೂರುಗಳನ್ನು ದಾಖಲಿಸಲಾಗುತ್ತದೆ. ಈಗಾಗಲೇ ಸಕಾಲ ಅಥವಾ ಏಕೀಕೃತ ದೂರು ನಿವಾರಣಾ ವ್ಯವಸ್ಥೆಯಲ್ಲಿ ನೋಂದಾಯಿಸಿದ್ದರೂ 21 ದಿನಗಳ ಬಳಿಕವೂ ಪರಿಹಾರ ದೊರೆಯದ ಅಥವಾ ಅಸಮರ್ಪಕವಾಗಿ ಪರಿಹಾರವಾದ ದೂರುಗಳನ್ನು ಎರಡನೇ ಸರತಿಯಲ್ಲಿ ಪರಿಗಣಿಸಲಾಗುತ್ತದೆ.

ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು 1902 ಸಹಾಯವಾಣಿ ಅಥವಾ ಸರಕಾರದ ದೂರು ನಿವಾರಣಾ ಪೋರ್ಟಲ್ ಮೂಲಕ